**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಕುಂದಾಪುರ**

ಒ.ಎಸ್.ನಂಬ್ರಃ **149/2025** ಪಿ.ಡಬ್ಲ್ಯೂ **: 1**

ದಿನಾಂಕಃ 10-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು: 2 ನೇ ಪ್ರತಿವಾದಿ ಪರ ಎ.ಜಿ.ಪಿ. ರವರಿಂದಃ

ನನಗೆ ನನ್ನ ಜನನ ಪ್ರಮಾಣ ಪತ್ರದಲ್ಲಿ ಹೆಸರು ಬದಲಾಗಿರುವುದು 2025 ನೇ ಇಸವಿಯ ಫೆಬ್ರುವರಿಯಲ್ಲಿ ಗೊತ್ತಾಗಿರುತ್ತದೆ. ನಾನು 7 ನೇ ತರಗತಿಯ ವರ್ಗಾವಣೆ ಪತ್ರವನ್ನು ಪಡೆದಿರುವುದಿಲ್ಲ. ನಾನು ನನ್ನ ದಾವೆಯ ಜೊತೆ ಎಸ್ ಎಲ್ ಎಲ್ ಸಿ ಅಂಕಪಟ್ಟಿ ಮತ್ತು ನನ್ನ ಆಧಾರ ಕಾರ್ಡನ್ನು ಹಾಜರು ಮಾಡಿದ್ದೇನೆ. ನಾನು ನನ್ನ ಹೆಸರನ್ನು ಬದಲಾವಣೆ ಮಾಡಲು ಪುರಸಭೆಯವರಿಗೆ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಆದರೆ ಅವರು ನನಗೆ ಯಾವುದೇ ಹಿಂಬರಹವನ್ನು ನೀಡಿರುವುದಿಲ್ಲ. ಆ ಅರ್ಜಿಯ ಮೇಲೆ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ.

ಜನನ ಪ್ರಮಾಣ ಪತ್ರದಲ್ಲಿ ಜನ್ಮ ದಿನಾಂಕವನ್ನು ಸರಿಪಡಿಸಲು ಸಿವಿಲ್ ನ್ಯಾಯಾಲಯಕ್ಕೆ ಅಧಿಕಾರ ವ್ಯಾಪ್ತಿ ಇಲ್ಲದೆ ಇದ್ದರು ಸದರಿ ಪ್ರಕರಣವನ್ನು ದಾಖಲು ಮಾಡಿರುತ್ತೀರಿ ಎಂದರೆ ಸರಿಯಲ್ಲ. ನಿಮ್ಮ ದಾವೆಗೆ ಯಾವುದೇ ವ್ಯಾಜ್ಯ ಕಾರಣ ಇರುವುದಿಲ್ಲ ಎಂದರೆ ಸರಿಯಲ್ಲ. ನೀವು ಸರ್ಕಾರಕ್ಕೆ ಯಾವುದೇ ಕಾನೂನುಬದ್ಧ ನೋಟಿಸನ್ನು ನೀಡಿರುವುದಿಲ್ಲ.

ಮರು ವಿಚಾರಣೆ - ಇಲ್ಲ.

ಓದಿ ಹೇ. ಕೇ. ಸರಿ ಇದೆ. ನನ್ನ ಹೇ. ಮೇ. ಬೆ. ಮಾಡಲಾಗಿದೆ

**2 ನೇ** ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ